# ಸ್ವರ್ಣವಲ್ಲೀ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಕರೆ

# ತಾಮಸ ಹವ್ಯಾಸದಿಂದ ದೂರವಿರಿ

ಪ್ರಜಾವಾಣಿ ವಾರ್ತೆ

ಶಿರಸಿ: 'ವಿದ್ಯಾರ್ಥಿಗಳು ತಮ್ಮ ಬದುಕಿನಲ್ಲಿ ತಾಮಸ ಹವ್ಯಾಸಗಳಾದ ಮದ್ಯಪಾನ, ಧೂಮಪಾನ, ಮೊಬೈಲ್ ಆಟಗಳನ್ನು ರೂಢಿಸಿಕೊಂಡರೆ ಅವು ಅಧಃಪತನಕ್ಕೆ ಕೊಂಡೊಯ್ಯುತ್ತವೆ' ಎಂದು ಸ್ವರ್ಣವಲ್ಲೀ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ನುಡಿದರು.

ಸ್ವರ್ಣವಲ್ಲೀ ರಾಜರಾಜೇಶ್ವರೀ ವಿದ್ಯಾ ಸಂಸ್ಥೆ ಅಂಗ ಸಂಸ್ಥೆಯಾದ ಶ್ರೀನಿಕೇತನ ಶಾಲೆಯಲ್ಲಿ ಈಚೆಗೆ ನಡೆದ ಸಾಂಸ್ಕೃತಿಕೋತ್ಸವದ ಸಾನ್ನಿಧ್ಯ ವಹಿಸಿ ಅವರು ಆಶೀರ್ವದಿಸಿದರು.

'ವಿದ್ಯಾರ್ಥಿಗಳು ಸಾತ್ವಿಕ ಹಾಗೂ ರಾಜಸಿಕ ಹವ್ಯಾಸಗಳನ್ನು ಬೆಳೆಸಿ ಕೊಳ್ಳುವುದರಿಂದ ಉದ್ವೇಗ ಹಾಗೂ ಆಪತ್ತನ್ನು ಎದುರಿಸುವ ಸಾಮರ್ಥ್ಯ ಗಳಿಸಿಕೊಳ್ಳುತ್ತಾರೆ' ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಭೀಮಣ್ಣ ನಾಯ್ಕ, 'ಸರ್ಕಾರದ ಜತೆಗೆ ಮಠಗಳು ನಡೆಸುವ ಶಾಲೆಗಳು ಸಮಾಜದ ಅನಕ್ಷರತೆಯನ್ನು ಹೋಗಲಾಡಿಸುವುದರಲ್ಲಿ ಮುಖ್ಯ ಪಾತ್ರ ವಹಿಸುತ್ತಿವೆ' ಎಂದು ತಿಳಿಸಿದರು.

ಎನ್.ಐ.ಟಿ.ಕೆ. ಉಪನ್ಯಾಸಕ ಅರುಣ್ ಇಸಳೂರು, 'ಭವಿಷ್ಯದಲ್ಲಿ ಕೌಶಲಾಧಾರಿತ ಕಲಿಕೆಯು ಹೆಚ್ಚು ಪ್ರಾಮುಖ್ಯ ಪಡೆಯುತ್ತದೆ' ಎಂದರು. ಮಕ್ಕಳ ಭವಿಷ್ಯ ರೂಪಿಸುವಾಗ ಆಯ್ಕೆ ಮಾಡಬೇಕಾದ ಕೋರ್ಸ್‌ಗಳ ಕುರಿತು ಮಾಹಿತಿ ನೀಡಿದರು.

ವಿಶೇಷ ಸಾಧನೆ ಮಾಡಿದ ಮಕ್ಕಳನ್ನು ಹಾಗೂ ಸಿಬ್ಬಂದಿಯನ್ನು ಸನ್ಮಾನಿಸಲಾಯಿತು. ಶಾಲೆಯ ಕಾರ್ಯದರ್ಶಿ ಪ್ರೊ. ಕೆ.ಎನ್. ಹೊಸಮನಿ ಸ್ವಾಗತಿಸಿದರು. ಶಾಲೆಯ ಅಧ್ಯಕ್ಷ ಮೇಜರ್ ರಘುನಂದನ ಹೆಗಡೆ ಪರಿಚಯಿಸಿದರು. ಪ್ರಾಚಾರ್ಯ ವಸಂತ ಭಟ್ ವರದಿ ವಾಚಿಸಿದರು. ಇದೇ ಸಂದರ್ಭದಲ್ಲಿ ಸ್ವಾಮೀಜಿ ಅವರು ಶಾಲಾ ಚಟುವಟಿಕೆಗಳ ಪುಸ್ತಕಗಳನ್ನು ಲೋಕಾರ್ಪಣೆಗೈದರು.

ರಾಜರಾಜೇಶ್ವರಿ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಶಿವರಾಮ ಭಟ್ ವಂದಿಸಿದರು. ಶ್ವೇತಾ ಹೆಗಡೆ ಹಾಗೂ ರಮ್ಯಾ ನಾಯ್ಕ ನಿರೂಪಿಸಿದರು. ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು.



ಶಿರಸಿಯ ಶ್ರೀನಿಕೇತನ ಶಾಲೆಯಲ್ಲಿ ಸಾಂಸ್ಕೃತಿಕೋತ್ಸವಕ್ಕೆ ಶಾಸಕ ಭೀಮಣ್ಣ ನಾಯ್ಕ ಚಾಲನೆ ನೀಡಿದರು